# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1021(1342)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗಾಗಿ ವಿಶೇಷ ಘಟಕಗಳನ್ನು ಸ್ಥಾಪಿಸುವ ಬಗ್ಗೆ

(ಅ) ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವ ಯಾವ ಕಾಯಿಲೆಗಳ ಚಿಕಿತ್ಸೆಗಾಗಿ ವಿಶೇಷ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ; ಈ ಘಟಕಗಳಲ್ಲಿ ಕಳೆದ 3 ವರ್ಷಗಳಲ್ಲಿ ದಾಖಲಾಗಿ ಚಿಕಿತ್ಸೆ ಪಡೆದ ರೋಗಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಜಿಲ್ಲಾ ಆಸ್ಪತ್ರೆಗಳಿಗೆ ಮಂಜೂರಾಗಿರುವ ಹುದ್ದೆಗಳು ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ನಕಲಿ ವೈದ್ಯರ ಹಾವಳಿಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ಕಳೆದೆರಡು ವರ್ಷಗಳಲ್ಲಿ ಯಾವುದಾದರು ಸಾಂಕ್ರಮಿಕ ರೋಗಗಳು ಕಾಣಿಸಿಕೊಂಡಿವೆಯೇ; ಈ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)